**Office of the Chief Electoral Officer, Karnataka**
Nirvachana Nilaya, Sheshadri Road, Bangalore-560 001.

## ಪತ್ರಿಕಾ ಪ್ರಕಟಣೆ

### ಜೂನ್ 20 ರಂದು ಪದವಿಧರ ಹಾಗೂ ಶಿಕ್ಷಕರ ಕ್ಷೇತ್ರಗಳ ಮತದಾರರಿಗೆ ವಿಶೇಷ ಸಾಂಧರ್ಭಿಕ ರಜೆ

ದಿನಾಂಕ : 20.06.2014 ರಂದು ಕರ್ನಾಟಕ ವಿಧಾನ ಪರಿಷತ್ತಿನ ಆಗ್ನೇಯ ಪದವಿಧರ ಕ್ಷೇತ್ರ, ಪಶ್ಚಿಮ ಪದವಿಧರ ಕ್ಷೇತ್ರ ಹಾಗೂ ಈಶಾನ್ಯ ಶಿಕ್ಷಕರ ಕ್ಷೇತ್ರ ಮತ್ತು ಬೆಂಗಳೂರು ಶಿಕ್ಷಕರ ಕ್ಷೇತ್ರಗಳಿಗೆ ದ್ವೈವಾರ್ಷಿಕ ಚುನಾವಣೆಯನ್ನು ನಡೆಸಲು ಘೋಷಿಸಲಾಗಿರುತ್ತದೆ. **ಪದವಿಧರ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ** ಚಿತ್ರದುರ್ಗ, ದಾವಣಗೆರೆ ( ಚೆನ್ನಗಿರಿ, ಹೊನ್ನಾಳಿ ಹಾಗೂ ಹರಪನಹಳ್ಳಿ ತಾಲ್ಲೂಕು ಹೊರತುಪಡಿಸಿ) ಧಾರವಾಡ, ಹಾವೇರಿ, ಗದಗ ಹಾಗೂ ಉತ್ತರ ಕನ್ನಡ ಜಿಲ್ಲೆಗಳು ಮತ್ತು **ಶಿಕ್ಷಕರ ಕ್ಷೇತ್ರಗಳ ವ್ಯಾಪ್ತಿಗೆ ಒಳಪಡುವ** ಬೀದರ್, ಗುಲಬರ್ಗಾ, ರಾಯಚೂರು, ಕೊಪ್ಪಳ, ಬಳ್ಳಾರಿ, ಯಾದಗಿರಿ, ದಾವಣಗೆರೆ ಜಿಲ್ಲೆಯ ಹರಪನಹಳ್ಳಿ ತಾಲ್ಲೂಕು ಬೆಂಗಳೂರು ನಗರ ಜಿಲ್ಲೆಯ ಬಿಬಿಎಂಪಿ ಪ್ರದೇಶ ಸೇರಿದಂತೆ ಬೆಂಗಳೂರು ಗ್ರಾಮಾಂತರ ಜಿಲ್ಲೆ ಮತ್ತು ರಾಮನಗರ ಜಿಲ್ಲೆಗಳ ಸರ್ಕಾರಿ ಹಾಗೂ ಖಾಸಗಿ ಶಾಲಾ ಕಾಲೇಜುಗಳು ಅನುದಾನಿತ ಹಾಗೂ ಅನುದಾನ ರಹಿತ ವಿದ್ಯಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಶೈಕ್ಷಣಿಕ ಸಂಸ್ಥೆಗಳು, ರಾಜ್ಯ ಹಾಗೂ ಕೇಂದ್ರ ಸರ್ಕಾರದ ಕಛೇರಿಗಳು, ರಾಷ್ಟ್ರೀಕೃತ ಹಾಗೂ ಇತರ ಬ್ಯಾಂಕುಗಳು, ರಾಜ್ಯ ಸರ್ಕಾರದ ಕಾರ್ಖಾನೆಗಳು, ಕೇಂದ್ರ ಸರ್ಕಾರದ ಕಾರ್ಖಾನೆಗಳು ಉಳಿದ ಕೈಗಾರಿಕಾ ಸಂಸ್ಥೆಗಳು ಹಾಗೂ ಸಹಕಾರಿ ರಂಗದ ಸಂಘ ಸಂಸ್ಥೆಗಳಲ್ಲಿ ಕೆಲಸ ನಿರ್ವಹಿಸುವ ಪದವಿಧರ ಹಾಗೂ ಶಿಕ್ಷಕರ ಕ್ಷೇತ್ರದ ಮತದಾರರು ಮತದಾನ ಮಾಡಲು ಅನುಕೂಲವಾಗುವಂತೆ ಅಂತಹ ಅರ್ಹ ಮತದಾರರಿಗೆ ಸೀಮಿತವಾದಂತೆ ಹಾಗೂ ಎಲ್ಲಾ ವ್ಯವಹಾರಿಕ ಸಂಸ್ಥೆಗಳು, ಔದ್ಯಮಿಕ ಸಂಸ್ಥೆಗಳು ಮತ್ತು ಇನ್ನಿತರ Establishment ಗಳಲ್ಲಿ ಖಾಯಂ ಆಗಿ ಅಥವಾ ದಿನಗೂಲಿ ಮೇಲೆ ಕೆಲಸ ನಿರ್ವಹಿಸುತ್ತಿರುವ ಎಲ್ಲಾ ಅರ್ಹ ಮತದಾರರಿಗೆ ಸೀಮಿತವಾದಂತೆ ಮತದಾನ ಮಾಡಲು ಅನುಕೂಲವಾಗುವಂತೆ Negotiable Instruments Act 1881, ಕಲಂ 25ರಡಿ ಮತ್ತು Representation of People Act, 1951 ಕಲಂ 135 ಬಿ ಅಡಿಯಲ್ಲಿ **ವಿಶೇಷ ಸಾಂಧರ್ಭಿಕ ರಜೆಯನ್ನು** ಮಂಜೂರು ಮಾಡಿ ಕರ್ನಾಟಕ ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಆದೇಶ ಹೊರಡಿಸಿದೆ.